# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103
ದೂರವಾಣಿ: 0816-2254546, 0816-2255596, 0816-2255597 ಫ್ಯಾಕ್ಸ್: 0816-2270719

ಸಂಖ್ಯೆ:ತುವಿತು:ಖ.ಕೋ:2024-25/2484 ದಿನಾಂಕ: 30.11.2024.

## ದರಪಟ್ಟಿ ಆಹ್ವಾನ (ವಿ.ವಿ ವೆಬ್ ಸೈಟ್ ಮುಖಾಂತರ)

ವಿಷಯ: ವಿಶ್ವವಿದ್ಯಾನಿಲಯಕ್ಕೆ Firewall UTM ಉಪಕರಣವನ್ನು ಸರಬರಾಜು ಮಾಡಲು ದರಪಟ್ಟಿ ಆಹ್ವಾನಿಸಿರುವ ಕುರಿತು.

ಉಲ್ಲೇಖ: 1. ಸಿಸ್ಟಂ ಅನಾಲಿಸ್ಟ್ ಇವರ ಪತ್ರದ ದಿನಾಂಕ:06.11.2024.
2. ವಿ.ವಿ ಅಧಿಸೂಚನೆ ಪತ್ರದ ಸಂಖ್ಯೆ: ತುವಿತು:ಕೆ.ಟಿ.ಪಿ.ಪಿ/ತಿ.ಪ/ಖ.ಕೋ/2022-23/9035 ದಿನಾಂಕ: 09.09.2022.
3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ29.11.2024 (ಕಂಡಿಕೆ-85)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯಕ್ಕೆ Firewall UTM ಉಪಕರಣವನ್ನು ಸರಬರಾಜು ಮಾಡಲು ಉಲ್ಲೇಖ(01) ರ ಬೇಡಿಕೆಯನುಸಾರ ಉಲ್ಲೇಖ(02)ರ ವಿಶ್ವವಿದ್ಯಾನಿಲಯದ ಅಧಿಸೂಚನೆಯನ್ವಯ ಕರ್ನಾಟಕ ಪಾರದರ್ಶಕತೆ ಅಧಿನಿಯಮ 2000ರ ತಿದ್ದುಪಡಿ 4(i)(ii)ರ ನಿಯಮದನ್ವಯ ದರಪಟ್ಟಿಯನ್ನು ಸಲ್ಲಿಸಲು ಕೆಳಕಂಡ ವಿವರ ಹಾಗೂ ಷರತ್ತುಗಳಿಗೊಳಪಟ್ಟು ಆಸಕ್ತ ಸಂಸ್ಥೆಗಳಿಂದ ದರಪಟ್ಟಿ ಆಹ್ವಾನಿಸಲಾಗಿದೆ.

| SL. No | Items & Specification | Quantity | Brand and Model | Rate to be quoted (incl.All taxes & service) |
|---|---|---|---|---|
| 1 | Firewall UTM Secured device Upgradeable with advanced security features for 250 users or equivalent - 3years license validity | 01 | | |

ಷರತ್ತುಗಳು:

1. ಮುಚ್ಚಿದ ಲಕೋಟೆಯ ಮೇಲೆ **"Firewall Device ಸರಬರಾಜು ಕುರಿತು ದರಪಟ್ಟಿ"**ಎಂದು ನಮೂದಿಸುವುದು.
2. ದರಪಟ್ಟಿಗಳನ್ನು **ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು-572 103,** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
3. ಸದರಿ ದರಪಟ್ಟಿಯು ಒಂದು ಲಕ್ಷ ಮೀರಿದ ಸಾಮಗ್ರಿಗಳು/ಸೇವೆಗಳಿಗೆ ಸಂಬಂಧಿಸಿರುವುದರಿಂದ ಸದರಿ ಸೇವೆಗೆ ಕೆ.ಟಿ.ಪಿ.ಪಿ ನಿಯಮಾನುಸಾರ ರೂ. 10,000/- ಗಳ ಇ.ಎಂ.ಡಿ ಮೊತ್ತವಾಗಿ Banker's guarantee / Demand Draft / Pay Order/FDR/Cheque in favor of "Finance Officer, Tumkur University" payable at Tumakuru ಇವರಿಗೆ ದರಪಟ್ಟಿಯೊಂದಿಗೆ ಸಲ್ಲಿಸತಕ್ಕದ್ದು.
4. **ಇಎಂಡಿ ವಿನಾಯಿತಿ ಕೋರಿದ್ದಲ್ಲಿ NSIC/MSME ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸತಕ್ಕದ್ದು.**
5. **ಸದರಿ ಸೇವೆಯು ರೂ.4.00ಲಕ್ಷಗಳ ಮಿತಿಗೊಳಪಟ್ಟಿರುತ್ತದೆ.**
6. ಸರಬರಾಜು ಸಂಸ್ಥೆಯವರು ತಮ್ಮ ಸಂಸ್ಥೆಯ GST No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯೊಂದಿಗೆ ಲಗತ್ತಿಸತಕ್ಕದ್ದು.
7. ಸರಬರಾಜು ಮಾಡಲು ಯಾವುದೇ ಮುಂಗಡವನ್ನು ನೀಡಲಾಗುವುದಿಲ್ಲ.
8. ದರಪಟ್ಟಿಯಲ್ಲಿ ನಮೂದಿಸಿರುವ ದರಗಳು ತೆರಿಗೆ ಹಾಗೂ ಸೇವೆಯ ಮೊತ್ತವನ್ನು ಒಳಗೊಂಡಿರತಕ್ಕದ್ದು.
9. ದರಪಟ್ಟಿಯನ್ನು ಅಂಗೀಕರಿಸುವಾಗ ಸಂಸ್ಥೆಗಳು ಸಲ್ಲಿಸಿದ ದರಪಟ್ಟಿಯ ಸರಾಸರಿ ಮೊತ್ತವನ್ನು ಪರಿಗಣಿಸಲಾಗುವುದು

10. ದರಪಟ್ಟಿ ಸಲ್ಲಿಸುವರು **Firewall Device model** ಅನ್ನು ನಮೂದಿಸಬೇಕು ಹಾಗು ಸರಬರಾಜು ಮಾಡುವ ಸಂದರ್ಭದಲ್ಲಿ ಈಗ ಹಾಲಿ ಇರುವ ಉಪಕರಣದ ದತ್ತಂಶವನ್ನು ಹೋಸ ಉಪಕರಣಕ್ಕೆ ಅಳವಡಿಸಿ ಕೋಡಬೇಕಾಗುತ್ತದೆ
11. ಸರಬರಾಜುದಾರರು ನಮೂದಿಸುವ ದರಗಳು ಮೂರು ತಿಂಗಳ ಅವಧಿಯವರೆಗೆ ಚಾಲ್ತಿಯಲ್ಲಿರಬೇಕು.
12. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಗಳನ್ನು ಮಾತ್ರ ಸಲ್ಲಿಸತಕ್ಕದ್ದು.
13. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
14. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
15. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
16. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 06.12.2024. ಸಂಜೆ 5.00 ಗಂಟೆ.**
17. ದರಪಟ್ಟಿಯನ್ನು **ದಿನಾಂಕ: 07.12.2024 ರಂದು ಸಂಜೆ 4.30 ಗಂಟೆಗೆ ತೆರೆಯಲಾಗುವುದು.**
18. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಸಿಸ್ಟಂ ಅನಾಲಿಸ್ಟ ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

ಉಪಕುಲಸಚಿವರು
ಉಪಕುಲ ಸಚಿವರು
ಸಾಮಾನ್ಯ ವಿಭಾಗ
**ತುಮಕೂರು ವಿಶ್ವವಿದ್ಯಾಲಯ**
**ತುಮಕೂರು**

ಪ್ರತಿಗಳು:

1. ಸಿಸ್ಟಂ ಅನಾಲಿಸ್ಟ ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಛೇರಿ ಪ್ರತಿ.